1. ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2013

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಕೋಟಾ ಶ್ರೀನಿವಾಸ ಪೂಜಾರಿ [ಮುಜರಾಯಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಸಚಿವರು] :– ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು :– ವಿಧೇಯಕದ ಬಗ್ಗೆ ಸದನಕ್ಕೆ explain ಮಾಡಿ.

ಶ್ರೀ ಕೋಟಾ ಶ್ರೀನಿವಾಸ ಪೂಜಾರಿ [ಮುಜರಾಯಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಸಚಿವರು] :– ಮಾನ್ಯ ಅಧ್ಯಕ್ಷರೆ, ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರವನ್ನು ಸಾಂಸ್ಕೃತಿಕ ಕ್ಷೇತ್ರವನ್ನಾಗಿ, ಯಾತ್ರಾ ಸ್ಥಳವಾಗಿ ಮತ್ತು ಅಂತರರಾಷ್ಟ್ರೀಯ ಪ್ರವಾಸಿ ಕೇಂದ್ರವನ್ನಾಗಿ ಮಾಡುವ ದೃಷ್ಟಿಯಿಂದ ಹಾಗೂ ಶ್ರೀ ಮಲೈ ಮಹದೇಶ್ವರಸ್ವಾಮಿಗೆ ಸಂಬಂಧಪಟ್ಟ ಇತರ ಪ್ರಮುಖ ಸ್ಥಳಗಳನ್ನು ರಕ್ಷಿಸಲು, ಅಭಿವೃದ್ಧಿಪಡಿಸಲು ಈ ವಿಧೇಯಕವನ್ನು ತಯಾರಿಸಲಾಗಿದೆ ಮತ್ತು ಮಂಡಿಸಲಾಗಿದೆ, ಸದನ ಒಪ್ಪಿಗೆ ನೀಡುವುದು.

ಅಧ್ಯಕ್ಷರು :– ಈಗ ಪರ್ಯಾಲೋಚನಾ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವ ಏನೆಂದರೆ,

"ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ 2013 ಅನ್ನು ಸಭೆ ಪರ್ಯಾಲೋಚಿಸುವುದು"

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ
ಪ್ರಸ್ತಾವ ಅಂಗೀಕರಿಸಲ್ಪಟ್ಟಿತು
ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 40ರವರೆಗೆ:–

ಅಧ್ಯಕ್ಷರು :- ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ

2 ಮತ್ತು 40ನೇ ಖಂಡವು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

2ಮತ್ತು 40ರವರೆಗಿನ ಖಂಡಗಳು ವಿಧೇಯಕದ ಅಂಗವಾದವು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 40ರ ವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ :-

ಅಧ್ಯಕ್ಷರು :- ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾದವು

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಅಧ್ಯಕ್ಷರು :- ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

ಶ್ರೀ ಕೋಟಾ ಶ್ರೀನಿವಾಸ ಪೂಜಾರಿ [ಮುಜರಾಯಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಸಚಿವರು] :– ಮಾನ್ಯ ಅಧ್ಯಕ್ಷರೆ, ಶ್ರೀ ಮಲ್ಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ 2013 ಅನ್ನು ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು :– ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

ಶ್ರೀ ಮಲ್ಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ 2013 ಅನ್ನು ಈ ಸಭೆಯು ಅಂಗೀಕರಿಸುವುದು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು)

(ಅನುಬಂಧ–11)

2. 'ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ಸಿ.ಎಂ.ಆರ್. ವಿಶ್ವವಿದ್ಯಾಲಯ ವಿಧೇಯಕ, 2013

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿ.ಟಿ.ರವಿ [ಉನ್ನತ ಶಿಕ್ಷಣ ಸಚಿವರು] : ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಸಿ.ಎಂ.ಆರ್. ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲಾಯಿತು

ಅಧ್ಯಕ್ಷರು :– Explain ಮಾಡಿ.

ಶ್ರೀ ಸಿ.ಟಿ.ರವಿ [ಉನ್ನತ ಶಿಕ್ಷಣ ಸಚಿವರು]: ಉನ್ನತ ಶಿಕ್ಷಣ ಪಡೆಯುತ್ತಿರುವವರ ಸಂಖ್ಯೆಯನ್ನು ಗಣನೀಯವಾಗಿ ಹೆಚ್ಚಿಸಬೇಕೆನ್ನುವುದು ರಾಜ್ಯ ಸರ್ಕಾರದ ಅಭಿಪ್ರಾಯ. ಪ್ರಸ್ತುತ ರಾಜ್ಯದಲ್ಲಿರುವ Gross Enrolment Ratio 18% ಇದೆ. 2020ನೇ ಸಾಲಿಗೆ ಅದು 30%ಗೆ ಏರಿಸಬೇಕು.